2012

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯಃ ಕೋಲಾರ ಜಿಲ್ಲೆ, ಮುಳಬಾಗಿಲು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಸಂಬಂಧ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ. ನಅಇ/78/ಬೆಂರೂಪ್ರಾ/2009, ದಿ:16-06-2009.

2) ಮುಖ್ಯಾಧಿಕಾರಿಗಳು ಹಾಗೂ ಸದಸ್ಯ ಕಾರ್ಯದರ್ಶಿಗಳು, ಪುರಸಭಾ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ. ಮುಪುಯೋ/ ಮಯೋಪ್ರ/ 01/2010-11, ದಿಃ17-02-2011.

3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತಸಂಖ್ಯೆ.ನಗ್ರಾಯೋ(22)/ಉನಿ(ಯೋವಿ)/ಮುಳಬಾಗಿಲು/ಮ.ಯೋ /896/2010-11, ದಿ :20.10.2012ರಲ್ಲಿ ನೀಡಿರುವ ಅಭಿಪ್ರಾಯ.

*****

ಪ್ರಸ್ತಾವನೆ:

ಮೇಲೆ ಓದಲಾದ(1)ರ ಸರ್ಕಾರಿ ಆದೇಶದಲ್ಲಿ ಮುಳಬಾಗಿಲು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ(2)ರ ಪತ್ರದಲ್ಲಿ ಮುಳಬಾಗಿಲು ಪುರಸಭೆ ಯೋಜನಾ ಪ್ರಾಧಿಕಾರವು ಮುಳಬಾಗಿಲು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ಮುಳಬಾಗಿಲು ಪಟ್ಟಣದ ಜನಸಂಖ್ಯೆಯು 2021 ರಲ್ಲಿ 75,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ಮುಳಬಾಗಿಲು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 850.00 ಹೆಕ್ಟೇರ್ ಪ್ರದೇಶದಲ್ಲಿ 750.00 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 750.00 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 418.52 ಹೆಕ್ಟೇರ್ (ಶೇ.55.80), ವಾಣಿಜ್ಯಕ್ಕಾಗಿ 36.17 ಹೆಕ್ಟೇರ್ (ಶೇ.4.80), ಕೈಗಾರಿಕೆಗಾಗಿ 32.68 ಹೆಕ್ಟೇರ್ (ಶೇ.4.35), ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕೆ 45.34 ಹೆಕ್ಟೇರ್ (ಶೇ.6.05), ಉದ್ಯಾನವನ / ಬಯಲು ಜಾಗೆಗಳಿಗೆ 80.80 ಹೆಕ್ಟೇರ್ (ಶೇ.10.78), ಸಾರ್ವಜನಿಕ ಉಪಯುಕ್ತತೆಗಾಗಿ 0.66 ಹೆಕ್ಟೇರ್ (ಶೇ.0.08) ಹಾಗೂ ಸಾರಿಗೆ / ಸಂಪರ್ಕ ವಲಯಕ್ಕೆ 135.83 ಹೆಕ್ಟೇರ್ (ಶೇ.18.14) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ

..2

ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ : ನಅಇ 221 ಬೆಂರೂಪ್ರಾ 2012, ಬೆಂಗಳುರು,**
**ದಿನಾಂಕ: 14.12.2012**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮುಳಬಾಗಿಲು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ಎಂ. ವಾಸುದೇವ ರಾವ್)
ಸರ್ಕಾರದ ಅಧೀನ ಕಾರ್ಯದರ್ಶಿಗಳು
ನಗರಾಭಿವೃದ್ಧಿ ಇಲಾಖೆ

**ಇವರಿಗೆ:**

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2. ಮುಖ್ಯಾಧಿಕಾರಿಗಳು ಹಾಗೂ ಸದಸ್ಯ ಕಾರ್ಯದರ್ಶಿಗಳು ಮುಳಬಾಗಿಲು ಪುರಸಭೆ ಯೋಜನಾ ಪ್ರಾಧಿಕಾರ, ಮುಳಬಾಗಿಲು
3. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಕೋಲಾರ ಇವರಿಗೆ ಮಾಹಿತಿಗಾಗಿ.
4. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಚೇರಿ
ಕ್ರಮ ಸಂಖ್ಯೆ 537
ದಿನಾಂಕ 15/12/12

41